## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 719 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೋಟ್ಯಾಂತರ ಜನರ ಹಸಿವು ನೀಗಿಸುತ್ತಿರುವ 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಮತ್ತು ರಾಜ್ಯದ ಅನ್ನಭಾಗ್ಯ ಯೋಜನೆ ಅಕ್ಕಿಗೆ ಡಿಜಿಟಲ್ ಕನ್ನ ಹಾಕುತ್ತಿರುವ ವಿಚಾರ ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:07.06.2025 ರಂದು ವಿಜಯವಾಣಿ ದಿನ ಪತ್ರಿಕೆಯಲ್ಲಿ ರಾಜ್ಯ ಬಡವರ ಪಡಿತರಕ್ಕೆ ಡಿಜಿಟಲ್ ಕನ್ನ ಎಂಬ ಶೀರ್ಷಿಕೆಯಡಿ ಲೇಖನವನ್ನು ಪ್ರಕಟಿಸಲಾಗಿರುತ್ತದೆ. ಸದರಿ ಲೇಖನದಲ್ಲಿ ಪ್ರಕಟಿಸಲಾದ ಅಂಶಗಳ ಸತ್ಯಾಸತ್ಯತೆಗಳನ್ನು ಪರಿಶೀಲಿಸಲು ಜಂಟಿ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಮೈಸೂರು ಇವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಿ ಪರಿಶೀಲಿಸಲು ಆದೇಶಿಸಲಾಗಿತ್ತು. ಸದರಿ ಸಮಿತಿಯು ವಿಜಯವಾಣಿ ಪತ್ರಿಕೆಯಲ್ಲಿ ಪ್ರಕಟವಾದ ಎಲ್ಲಾ ಅಂಶಗಳ ಬಗ್ಗೆ ಪರಿಶೀಲಿಸಿದ್ದು ಯಾವುದೇ ನ್ಯೂನ್ಯತೆ ಕಂಡುಬಂದಿರುವುದಿಲ್ಲವೆಂದು ವರದಿ ಮಾಡಿರುತ್ತಾರೆ.<br>ಆಹಾರ ತಂತ್ರಾಂಶವನ್ನು ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರ (KSDC) ರವರು ನಿರ್ವಹಿಸುತ್ತಿದ್ದು, ಸದರಿ ಸರ್ವರ್‌ಗಳ ಸೆಕ್ಯೂರಿಟಿ ಆಡಿಟ್‌ನ್ನು ಪ್ರತಿ ವರ್ಷ ಮಾಡಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಡಿಜಿಟಲ್ ಕನ್ನ ಹಾಕುವುದಕ್ಕೆ ಕಡಿವಾಣ ಹಾಕಲು ಕೈಗೊಂಡಿರುವ ಭದ್ರತಾ ಕ್ರಮಗಳೇನು; | |
| ಇ | ಮುಂದುವರೆದು ಡಿಜಿಟಲ್ ಕನ್ನ ಮೂಲಕ ಅಕ್ರಮ ಪಡಿತರ ಮಾರಾಟ ಮತ್ತು ದಾಸ್ತಾನು ಮಾಡಿರುವವರ ಪತ್ತೆ ಹಚ್ಚಲಾಗಿದೆಯೇ; ಪತ್ತೆ ಹಚ್ಚಿದಲ್ಲಿ ಎಷ್ಟು ದಾವೆಗಳನ್ನು ಹೂಡಲಾಗಿದೆ ಮತ್ತು ಎಷ್ಟು ಕ್ವಿಂಟಾಲ್ ಆಹಾರ ಪದಾರ್ಥಗಳನ್ನು ವಶಕ್ಕೆ ಪಡೆಯಲಾಗಿದೆ? | ಅನ್ವಯಿಸುವುದಿಲ್ಲ. |

ಇ-ಆನಾಸ 218 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು